# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 582 (672) |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು |
| ಉತ್ತರಿಸುವ ದಿನಾಂಕ | : | 09.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಆನ್ ಲೈನ್ ಗೇಮಿಂಗ್ ಚಟಕ್ಕೆ (Online Gaming Addiction) ಬಲಿಯಾಗುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| ಆ) | ವರದಿಯ ಪ್ರಕಾರ ರಾಜ್ಯದ ಶೇ. 10.69ರಷ್ಟು ಮಂದಿ ತಂತ್ರಜ್ಞಾನ ವ್ಯಸನಕ್ಕೆ ಮತ್ತು ಶೇ8.91 ರಷ್ಟು ಮಂದಿ ಮೊಬೈಲ್ ಗೇಮಿಂಗ್ ವ್ಯಸನಕ್ಕೆ ಒಳಗಾಗಿರುವುದು ನಿಜವೇ; ಈ ಬಗ್ಗೆ ಸರ್ಕಾರ ಯಾವುದಾದರೂ ಅಧಿಕೃತ ಸಮೀಕ್ಷೆ ನಡೆಸಿದೆಯೇ; | ಇಲ್ಲ |
| ಇ) | ಆನ್‌ಲೈನ್ ಗೇಮಿಂಗ್‌ನಿಂದಾಗಿ ಮಕ್ಕಳು ಸಾಲದ ಸುಳಿಗೆ ಸಿಲುಕುವುದು ಮಾನಸಿಕ ಖಿನ್ನತೆಗೆ ಒಳಗಾಗುವುದು ಮತ್ತು ಆತ್ಮಹತ್ಯೆಯಂತಹ ಘಟನೆಗಳು ವರದಿಯಾಗುತ್ತಿವೆ; ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು; | 2026-27ನೇ ಅಯವ್ಯಯ ಭಾಷಣದ ಕಂಡಿಕೆ 118ರಲ್ಲಿ ಕೆಳಕಂಡಂತೆ ಘೋಷಿಸಲಾಗಿದೆ.<br><br>"ಹೆಚ್ಚುತ್ತಿರುವ ಮೊಬೈಲ್ ಬಳಕೆಯಿಂದ ಮಕ್ಕಳ ಮೇಲೆ ಬೀರುವ ಅಡ್ಡ ಪರಿಣಾಮಗಳನ್ನು ತಡೆಗಟ್ಟುವ ಉದ್ದೇಶದಿಂದ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣದ ಬಳಕೆಯನ್ನು ನಿಷೇಧಿಸಲಾಗುವುದು"<br><br>ಆಯವ್ಯಯ ಘೋಷಣೆಯಂತೆ ಪರಿಶೀಲಿಸಿ ಕ್ರಮವಹಿಸಲಾಗುವುದು. |

....2

| | | |
|---|---|---|
| ಈ) | ಶಾಲಾ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಮೊಬೈಲ್ ಮತ್ತು ಆನ್‌ಲೈನ್ ಗೇಮ್‌ಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲು ಶಿಕ್ಷಣ ಇಲಾಖೆಯು ಹಮ್ಮಿಕೊಂಡಿರುವ ವಿಶೇಷ ಕಾರ್ಯಕ್ರಮಗಳೇನು; | ಸುತ್ತೋಲೆ ಸಂಖ್ಯೆ: ಇಪಿ 375 ಪಿಜಿಸಿ 2025 : 28.01.2026ರನ್ವಯ "ವಿದ್ಯಾರ್ಥಿಗಳಲ್ಲಿ ಓದುವ ಅಭಿರುಚಿ ಬೆಳಸಿ "ಮೊಬೈಲ್ ಬಳಕೆ ನಿಯಂತ್ರಿಸುವ ಉದ್ದೇಶದಿಂದ ಮೊಬೈಲ್ ಬಿಡಿ ಪುಸ್ತಕ ಹಿಡಿ" ಅಭಿಯಾನವನ್ನು 2026-27ನೇ ಸಾಲಿಗೆ ಹಮ್ಮಿಕೊಳ್ಳಲಾಗಿದೆ.<br><br>ರಾಜ್ಯ ಹಂತದಿಂದ ಹಿಡಿದು ವಿವಿಧ ಹಂತಗಳಲ್ಲಿ ನಡೆಸಲಾಗುವ ಶಿಕ್ಷಕರ ತರಬೇತಿಗಳಲ್ಲಿ Cyber Safety and Security, Digital wellness, Financial Safety ಕುರಿತು ವಿಷಯ ಹಂಚಿಕೆ ಮಾಡುವ ಮೂಲಕ ಮೊಬೈಲ್ ಮತ್ತು ಇತರೆ ಡಿಜಿಟಲ್ ಉಪಕರಣಗಳ ಬಳಕೆಯಿಂದಾಗುವ ದುಷ್ಪರಿಣಾಮಗಳ ಕುರಿತಂತೆ ಜಾಗೃತಿ ಮೂಡಿಸಲಾಗುತ್ತಿದೆ. ಈ ಮೂಲಕ ಶಾಲಾ ವಿದ್ಯಾರ್ಥಿಗಳಿಗೂ ಅರಿವನ್ನು ಮೂಡಿಸಲು ಚಟುವಟಿಕೆಗಳನ್ನು ಹಮ್ಮಿಕೊಳ್ಳುವಂತೆ ಶಾಲಾ ಶಿಕ್ಷಕರಿಗೆ ಮಾರ್ಗದರ್ಶನ ನೀಡಲಾಗಿದೆ. ವಿಷಯಗಳ ಬಗ್ಗೆ ದೀಕ್ಷಾ ಪೋರ್ಟಲ್ ನಲ್ಲಿ ಅಳವಡಿಸಲಾಗಿರುವ ಕೋರ್ಸ್ ಗಳನ್ನು ಶಿಕ್ಷಕರು ಕೈಗೊಳ್ಳುವಂತೆ ಕ್ರಮ ವಹಿಸಲಾಗಿದೆ. |
| ಉ) | ಮಕ್ಕಳಲ್ಲಿ ತಂತ್ರಜ್ಞಾನದ ಅತಿಯಾದ ಬಳಕೆಯನ್ನು ನಿಯಂತ್ರಿಸಲು ಮತ್ತು ಪೋಷಕರಿಗೆ ಮಾರ್ಗದರ್ಶನ ನೀಡಲು ಸರ್ಕಾರಿ ಆಸ್ಪತ್ರೆಗಳಲ್ಲಿ ವಿಶೇಷ "ಡಿ-ಅಡಿಕ್ಷನ್" (De-addiction) ಕೇಂದ್ರಗಳನ್ನು ಸ್ಥಾಪಿಸುವ ಯೋಜನೆಯು ಸರ್ಕಾರದ ಮುಂದಿದೆಯೇ? | ಪ್ರಸ್ತುತ ಇಂತಹ ಯಾವುದೇ ಯೋಜನೆ ಸರ್ಕಾರದ ಮುಂದೆ ಇರುವುದಿಲ್ಲ |

ಸಂಖ್ಯೆ: ಇಪಿ 41 ಪಿಜಿಸಿ 2026

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು